# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ 1916
(ನ್ಯಾಕ್ ಸಂಸ್ಥೆಯ ಮರು ಮಾನ್ಯತೆಯಲ್ಲಿ 'ಎ' ಗ್ರೇಡ್ ಪಡೆದಿದೆ)
(ಎನ್.ಐ.ಆರ್.ಎಫ್-2024 ರಾಜ್ಯ ಸಾರ್ವಜನಿಕ ವಿಶ್ವವಿದ್ಯಾನಿಲಯ ವರ್ಗದಲ್ಲಿ 54ನೇ ಸ್ಥಾನ, ಮತ್ತು ಒಟ್ಟಾರೆ ವರ್ಗದಲ್ಲಿ 86ನೇ ಸ್ಥಾನ)

ಕುಲಸಚಿವ (ಪರೀಕ್ಷಾಂಗ)ರವರ ಕಛೇರಿ
ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು-570 005

ಸಂಖ್ಯೆ: ಪವಿ/8.6/07/ಅಧಿಸೂಚನೆ/2010-11 ದಿನಾಂಕ: **12-12-2025**

## ಅ ಧಿ ಸೂ ಚ ನೆ

ವಿಷಯ: **ಜನವರಿ-2026ರಲ್ಲಿ ಜರುಗುವ 1, 3 ಮತ್ತು 5ನೇ ಸೆಮಿಸ್ಟರ್‌ನ ಸ್ನಾತಕ ಪದವಿ (UG) (2020-21ನೇ ಶೈಕ್ಷಣಿಕ ಸಾಲಿನ ಪುನರಾವರ್ತಿತ ವಿದ್ಯಾರ್ಥಿಗಳಿಗೆ) ಪರೀಕ್ಷೆಯ ಬಗ್ಗೆ.**

ಉಲ್ಲೇಖ: ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಅವರ ಅಧಿಸೂಚನೆ ಸಂಖ್ಯೆ:ಎಸಿ2(ಎಸ್)/165/2024-25, ದಿನಾಂಕ:29-04-2025 (ಪರೀಕ್ಷಾ ಶುಲ್ಕಗಳಿಗೆ ಸಂಬಂಧಿಸಿರುವುದು).

******

**ಜನವರಿ-2026ರ ಮಾಹೆಯಲ್ಲಿ ನಡೆಯಲಿರುವ 1, 3 ಮತ್ತು 5ನೇ ಸೆಮಿಸ್ಟರ್‌ನ (CBCS Repeaters) ಸ್ನಾತಕ ಪದವಿ (UG) (2020-21ನೇ ಶೈಕ್ಷಣಿಕ ಸಾಲಿನ ಪುನರಾವರ್ತಿತ ವಿದ್ಯಾರ್ಥಿಗಳಿಗೆ) ವಿವಿಧ ಪದವಿ ಪರೀಕ್ಷೆಗಳ ವಿವರಗಳು ಕೆಳಕಂಡಂತಿರುತ್ತದೆ.**

| ಕ್ರಸಂ | ವಿವರಗಳು | ಅಂತಿಮ ದಿನಾಂಕ |
|---|---|---|
| 1 | ಪರೀಕ್ಷಾ ಶುಲ್ಕ ಪಾವತಿಸಲು ಹಾಗೂ ಭರ್ತಿಮಾಡಿದ ಅರ್ಜಿಗಳನ್ನು ಕಾಲೇಜಿಗೆ ಸಲ್ಲಿಸಲು | **02.01.2026** |
| 2. | ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಗಳನ್ನು ಕಾಲೇಜಿನವರು ಭರ್ತಿ ಮಾಡಲು (ಈ ಕೆಳಕಂಡ URL ಮುಖಾಂತರ ನಮೂದಿಸುವುದು)<br>http://14.139.155.139/ug<br>user id : college code<br>password : examcollegecode<br>Eg: user id : 1001<br>password : exam1001 | **05.01.2026** |
| 3 | ಪರೀಕ್ಷಾ ಶುಲ್ಕವನ್ನು ಡಿ.ಡಿ ಮೂಲಕ ಪರೀಕ್ಷಾ ಖಾತೆ ಸಂಖ್ಯೆ: 54007591200 **(Examination Account)** SBI, University Campus, Mysuru ಗೆ ಪಾವತಿಸಿ ಚಲನ್ ಪ್ರತಿಯನ್ನು ಈ ಕಛೇರಿಗೆ ಸಲ್ಲಿಸಲು | **07.01.2026** |
| 4 | ಪ್ರವೇಶ ಪತ್ರಗಳ ಮುದ್ರಣದ ನಂತರ ವಿಶ್ವವಿದ್ಯಾನಿಲಯದ ಅನುಮೋದನೆ ಪಡೆಯಲು [ಆನ್‌ಲೈನ್ ಮೂಲಕ ಅಭ್ಯರ್ಥನಾ ಪಟ್ಟಿಯನ್ನು ಮುದ್ರಿಸಿ ಪ್ರಾಂಶುಪಾಲರ ಸಹಿ ಪಡೆದು ಒಂದು ಪ್ರತಿಯನ್ನು ಪ್ರವೇಶ ಪತ್ರಗಳ ಜೊತೆಯಲ್ಲಿ ಕುಲಸಚಿವ (ಪರೀಕ್ಷಾಂಗ) ಇವರಿಗೆ ಸಲ್ಲಿಸಬೇಕು] | **08.01.2026** |
| 5 | ಪ್ರಾಯೋಗಿಕ ಪರೀಕ್ಷೆಗಳನ್ನು ಪ್ರಾರಂಭಿಸಿ ಪೂರ್ಣಗೊಳಿಸುವ ದಿನಾಂಕ | **13.01.2026** |
| 6 | ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ದಿನಾಂಕ | ಮುಂದೆ ತಿಳಿಸಲಾಗುವುದು |

**ಸೂಚನೆಗಳು:**

1. ಪರೀಕ್ಷಾ ಅರ್ಜಿಯು (CBCS- ಪದ್ಧತಿಯ Repeaters) **PDF Mode** ನಲ್ಲಿದ್ದು ವಿದ್ಯಾರ್ಥಿ ಪೋರ್ಟ್‌ಲ್, ಕಾಲೇಜ್ ಪೋರ್ಟ್‌ಲ್ ಮತ್ತು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಲಭ್ಯವಿದ್ದು, ವಿದ್ಯಾರ್ಥಿಗಳು ಸದರಿ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಳ್ಳುವುದು.

2. ಎಲ್ಲಾ ಪ್ರಾಯೋಗಿಕ ಪರೀಕ್ಷೆಗಳನ್ನು ದಿನಾಂಕ: 13.01.2026ರೊಳಗೆ ಪೂರ್ಣಗೊಳಿಸುವುದು. ಸದರಿ ಪರೀಕ್ಷೆಯನ್ನು ಬಾಹ್ಯ ಪರೀಕ್ಷಕರು (**External Examiners**) ನಡೆಸುವುದು.

3. ಪ್ರಾಯೋಗಿಕ ಪರೀಕ್ಷೆಗಳು ಮುಗಿದ ನಂತರ ಆ ದಿನದಂದೇ **Online** ಮುಖಾಂತರ ಅಂಕಗಳನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಅಂಕಗಳ ಮೂಲಪ್ರತಿಯನ್ನು ಈ ಕಛೇರಿಗೆ ಸಲ್ಲಿಸುವುದು.

4. ಎಲ್ಲಾ ಪದವಿ ವಿದ್ಯಾರ್ಥಿಗಳ ಪರೀಕ್ಷಾ ಅರ್ಜಿಗಳನ್ನು ಕಾಲೇಜಿನ ಇಂಟರ್‌ನೆಟ್ ಸೌಲಭ್ಯವನ್ನು ಬಳಸಿ ನೇರವಾಗಿ ವಿಶ್ವವಿದ್ಯಾನಿಲಯದ **Web Server** ಗೆ ಮಾಹಿತಿಯನ್ನು ವರ್ಗಾವಣೆ (**Online Transmission**) ಮಾಡುವಂತೆ / ನಮೂದಿಸುವಂತೆ ತಿಳಿಸಲಾಗಿದೆ. ಅನಿವಾರ್ಯ ಕಾರಣದಿಂದಾಗಿ ಕಾಲೇಜಿನಲ್ಲಿ ಇಂಟರ್‌ನೆಟ್ ಸೌಲಭ್ಯವಿಲ್ಲದಿದ್ದ ಪಕ್ಷದಲ್ಲಿ ಸ್ಥಳೀಯವಾಗಿ ಲಭ್ಯವಿರುವ ಯಾವುದೇ ಕಂಪ್ಯೂಟರ್ ಕೇಂದ್ರದಿಂದಲೂ ಮಾಹಿತಿ ರವಾನಿಸಬಹುದಾಗಿದೆ.

## ಪರೀಕ್ಷಾ ಶುಲ್ಕಗಳ ದರಗಳು

| | | |
|---|---|---|
| **1.** | **B.A. / B.P.A. / B.A. (Fine Arts) B.V.A / B.Com :** | |
| | a) I & III Semester whole Examination | **Rs.1,760/-** |
| | Per paper with Practical | **Rs. 1,300/-** |
| | Per paper without Practical | **Rs. 1,110/-** |
| | b) V Semester whole Examination | **Rs.2,025/-** |
| | Per paper with Practical | **Rs. 1,300/-** |
| | Per paper without Practical | **Rs. 1,110/-** |
| | c) B.V.A. - VII Semester whole Examination | **Rs.2,375/-** |
| | Per paper with Practical | **Rs.1,600/-** |
| | Per paper without Practical | **Rs. 1,110/-** |
| **2.** | **B.Sc. / B.C.A. / B.Sc. in Family & Community Science :** | |
| | a) I & III Semester whole Examination | **Rs.1,920/-** |
| | Per paper with Practical | **Rs. 1,300/-** |
| | Per paper without Practical | **Rs. 1,110/-** |
| | b) V Semester whole Examination | **Rs.2,080/-** |
| | Per paper with Practical | **Rs. 1,300/-** |
| | Per paper without Practical | **Rs. 1,110/-** |
| **3.** | **B.F.A. / B.B.A. / B.A.S.L.P. / B. Ed .Spl. Ed. (H I) / BSW :** | |
| | a) I, III & V Semester Whole Examination (per semester) | **Rs.2,375/-** |
| | Per paper with Practical | **Rs.2,070/-** |
| | Per paper without Practical | **Rs.1,580/-** |
| | BASLP (Internship fee for 4th year) | **Rs.3,920/-** |
| **4.** | **B.B.A (T & H) / B.B.A(T & T) / B.T.H. / B.B.A.(T.H.M) :** | |
| | a) I, III & V Semester Whole Examination (per semester) | **Rs.4,130/-** |
| | Per paper with Practical | **Rs.2,070/-** |
| | Per paper without Practical | **Rs.1,580/-** |

***Subject to a maximum of whole examination Fee fixed per semester.***

**NOTE:** Science it is Semester Scheme, if a candidate is declared "exempted for any Practical examination", Examination fee for such candidate is same as that of per paper without Practical / Skill Development.

ಸೂಚನೆಗಳು:

1. <u>ಪಾವತಿಸಬೇಕಾದ ಒಟ್ಟು ಶುಲ್ಕವನ್ನು ಪರೀಕ್ಷಾ ಖಾತೆ ಸಂಖ್ಯೆ: 54007591200 (Examination Account) ಗೆ DD ಮೂಲಕ Finance Officer, University of Mysore, Mysuru ಇವರ ಹೆಸರಿಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ವಿಶ್ವವಿದ್ಯಾನಿಲಯ ಕ್ಯಾಂಪಸ್ ಶಾಖೆ, ಮೈಸೂರು ಇಲ್ಲಿ ಸಂದಾಯ ಮಾಡಿ ಮೂಲ ಪ್ರತಿಯನ್ನು ಈ ಕಛೇರಿಗೆ ಸಲ್ಲಿಸುವುದು.</u>
2. ಅಭ್ಯರ್ಥಿಗಳಿಂದ ನಗದಾಗಿ ಪಡೆದ ಒಟ್ಟು ಶುಲ್ಕಕ್ಕೆ ಮೇಲೆ ತಿಳಿಸಿರುವ ದಿನಾಂಕದೊಳಗಾಗಿ ಡಿಡಿ ಮೂಲಕ ಹಣ ಸಂದಾಯ ಮಾಡಿ ಚಲನ್‌ನ ಪ್ರತಿಯನ್ನು ಕುಲಸಚಿವ (ಪರೀಕ್ಷಾಂಗ) ಇವರಿಗೆ ಕಳುಹಿಸುವ ಜವಾಬ್ದಾರಿ ಕಾಲೇಜಿನ ಪ್ರಾಂಶುಪಾಲರುದ್ದಾಗಿರುತ್ತದೆ.
3. ವಿಶ್ವವಿದ್ಯಾನಿಲಯಕ್ಕೆ ಹಣ ಸಂದಾಯಮಾಡುವ ಸಂದರ್ಭದಲ್ಲಿ ಚಲನ್‌ನಲ್ಲಿ ಪ್ರತಿ ಪದವಿಯ ಸೆಮಿಸ್ಟರ್‌ವಾರು ಪರೀಕ್ಷಾ ಶುಲ್ಕವನ್ನು ಪ್ರತ್ಯೇಕವಾಗಿ ನಮೂದಿಸಿ ವಿವರಣೆಯೊಂದಿಗೆ ಸಲ್ಲಿಸಬೇಕು (ಪರೀಕ್ಷಾ ಶುಲ್ಕಗಳ ವಿವರಗಳನ್ನು ಮೇಲ್ಕಾಣಿಸಿದಂತೆ ವಿದ್ಯಾರ್ಥಿಗಳಿಂದ ಪಾವತಿಸಿಕೊಳ್ಳುವುದು ಮತ್ತು ಪ್ರತ್ಯೇಕ ಅಂಕಪಟ್ಟಿ ಶುಲ್ಕಗಳು ಇರುವುದಿಲ್ಲ).
4. ಅಭ್ಯರ್ಥನಾ ಪಟ್ಟಿಯ ಪ್ರತಿಪುಟದಲ್ಲಿ ಒಟ್ಟಾರೆ ಶುಲ್ಕವನ್ನು ಕ್ರೋಢೀಕರಿಸಿ ಅದನ್ನು ಮುಂದಿನ ಪುಟಕ್ಕೆ ಮುಂದುವರೆಸಿ ಕೊನೆಪುಟದಲ್ಲಿ ಒಟ್ಟಾರೆ ಸಂದಾಯವಾಗಬೇಕಿರುವ ಶುಲ್ಕವನ್ನು ನಮೂದಿಸಬೇಕು.

ವಿಶೇಷ ಸೂಚನೆಗಳು:

1. ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಆಯಾಯ ಕಾಲೇಜಿನವರು ಪರೀಕ್ಷೆಗಳು ಪ್ರಾರಂಭವಾಗುವುದಕ್ಕೆ ಸಾಕಷ್ಟು ಮುಂಚಿತವಾಗಿ online ಮೂಲಕ ಪ್ರಿಂಟ್ ಪಡೆದು, ಕುಲಸಚಿವರು (ಪರೀಕ್ಷಾಂಗ) ಇವರ ಯಥಾಪ್ರತಿ (Facsimile) ಹಾಕಿಸಿಕೊಳ್ಳಬೇಕು ಮತ್ತು ಕುಲಸಚಿವ(ಪ) ಅವರ ಯಥಾಪ್ರತಿ (Facsimile) ಇಲ್ಲದೆ ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಅವಕಾಶವಿರುವುದಿಲ್ಲ.
2. **ಪರೀಕ್ಷಾ ಶುಲ್ಕವನ್ನು ಪಾವತಿಸಲು ಸಾಕಷ್ಟು ಕಾಲಾವಕಾಶ ನೀಡಿರುವುದರಿಂದ ವಿದ್ಯಾರ್ಥಿಗಳಿಗೆ ಸೂಕ್ತ ತಿಳುವಳಿಕೆ ನೀಡಿ, ನಿಗದಿತ ದಿನಾಂಕದೊಳಗೆ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಯಾವುದೇ ಕಾರಣಕ್ಕೂ ಪರೀಕ್ಷಾ ಶುಲ್ಕ ಪಾವತಿಸಲು ಹೆಚ್ಚುವರಿ ಕಾಲಾವಕಾಶ ನೀಡಲಾಗುವುದಿಲ್ಲ.**
3. **ಪರೀಕ್ಷಾ ಕಾರ್ಯವು ಅತ್ಯಂತ ಪವಿತ್ರ ಕಾರ್ಯವಾಗಿದ್ದು, ಈ ಕಾರ್ಯದಲ್ಲಿ ತಮ್ಮ ಕಾಲೇಜಿನ ಒಬ್ಬರು ಅಧ್ಯಾಪಕರನ್ನು ಪರೀಕ್ಷಾ ದಿನದಂದು ಕೊಠಡಿ ಮೇಲ್ವಿಚಾರಕರಾಗಿ ಕಾರ್ಯ ನಿರ್ವಹಿಸಲು ನಿಯೋಜಿಸುವುದು. ನಿಯೋಜಿಸಲ್ಪಡುವ ಅಧ್ಯಾಪಕರಿಗೆ "Attendance Certificate" ಅನ್ನು ನೀಡಲಾಗುವುದು.**
4. **ಪರೀಕ್ಷೆಗಳನ್ನು ಮೌಲ್ಯಭವನ, ಮೈಸೂರು ವಿಶ್ವವಿದ್ಯಾನಿಲಯ ಅತಿಥಿ ಗೃಹದ ಹಿಂಭಾಗ, ಮಾನಸಗಂಗೋತ್ರಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇಲ್ಲಿ ನಡೆಸಲಾಗುವುದು.**

ವಿದ್ಯಾರ್ಥಿಗಳಿಗೆ ಸೂಚನೆಗಳು:

1. ಲಿಖಿತ ಪರೀಕ್ಷೆಗಳಿಗೆ ಸಂಬಂಧಪಟ್ಟ ವಿವರವಾದ ವೇಳಾಪಟ್ಟಿಯನ್ನು ಈ ಕಛೇರಿಯಿಂದ ಮುಂದಿನ ದಿನಗಳಲ್ಲಿ ಕಳುಹಿಸಲಾಗುವುದು.
2. ಪರೀಕ್ಷಾ ಶುಲ್ಕವನ್ನು ಯಾವ ಕಾರಣದಿಂದಲೂ ಮರುಪಾವತಿ ಮಾಡಲಾಗುವುದಿಲ್ಲ ಮತ್ತು ಅದನ್ನು ಮುಂದಿನ ಪರೀಕ್ಷೆಗಳಿಗೂ ಸರಿದೂಗಿಸಿಕೊಳ್ಳಲಾಗುವುದಿಲ್ಲ.
3. ವಿಳಂಬವಾಗಿ (ಟಿ.ಎ.ಎಲ್) ಫಲಿತಾಂಶ ಪ್ರಕಟವಾಗುವ ವಿದ್ಯಾರ್ಥಿಗಳಿಗೆ ಅವರ ಫಲಿತಾಂಶವು ತಲುಪಿದ ದಿನಾಂಕದಿಂದ 7 ದಿವಸಗಳ ಅವಧಿಯೊಳಗೆ ಯಾವುದೇ ರೀತಿಯ ದಂಡ ಶುಲ್ಕವಿಲ್ಲದೆ ಪರೀಕ್ಷಾ ಶುಲ್ಕ ಪಾವತಿಸಲು ಅನುಮತಿ ಇರುತ್ತದೆ.
4. ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಇತ್ತೀಚಿನ ಭಾವಚಿತ್ರದ ಮೇಲೆ ಪೂರ್ತಿ ಸಹಿ ಮಾಡಿ ವಿದ್ಯಾರ್ಥಿಯನ್ನು ಗುರುತಿಸಲಾಗಿದೆ, ಎಂದು ಬರೆಯಿಸಿ ಪ್ರಾಂಶುಪಾಲರಿಂದ ಸಹಿ ಮಾಡಿಸಿ ಅವರ ಪ್ರವೇಶ ಪತ್ರಿಕೆಗೆ ಅಂಟಿಸಿ ಪರೀಕ್ಷಾ ಅರ್ಜಿಯೊಡನೆ ಕಾಲೇಜಿಗೆ ನೀಡಬೇಕು.
5. ಎಲ್ಲಾ ವಿದ್ಯಾರ್ಥಿಗಳು ಪರೀಕ್ಷಾ ಅರ್ಜಿಯ ಜೊತೆಗೆ ತಾವು ಪರೀಕ್ಷೆ ತೆಗೆದುಕೊಂಡಿರುವ ಆಯಾ ಸೆಮಿಸ್ಟರ್/ವರ್ಷಕ್ಕೆ ಸಂಬಂಧಪಟ್ಟ ಪರೀಕ್ಷೆಗಳ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳನ್ನು ಕಡ್ಡಾಯವಾಗಿ ಲಗತ್ತಿಸಬೇಕು.

ಪ್ರಾಂಶುಪಾಲರುಗಳಿಗೆ ಸಾಮಾನ್ಯ ಸೂಚನೆಗಳು:

1. ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿಗಳ ಮಾಹಿತಿಯನ್ನು Online ಮೂಲಕ ಎಂಟ್ರಿ ಮಾಡಿದ ನಂತರ ಕಾಲೇಜು ಹಂತದಲ್ಲಿಯೇ ಪ್ರವೇಶ ಪತ್ರಗಳನ್ನು ಮುದ್ರಿಸುವ ವ್ಯವಸ್ಥೆಯನ್ನು ಮಾಡಲಾಗುವುದು. ವಿದ್ಯಾರ್ಥಿಗಳ ಹಾಜರಾತಿ ಮತ್ತು ಪ್ರವೇಶಾತಿ ಅನುಮತಿಯನ್ನು ಪ್ರವೇಶಪತ್ರದಲ್ಲಿ ದೃಢೀಕರಿಸಿದ ನಂತರ ಕುಲಸಚಿವ (ಪರೀಕ್ಷಾಂಗ) ಅವರ ಮೇಲುಸಹಿಗಾಗಿ ಪರೀಕ್ಷೆ ಪ್ರಾರಂಭಕ್ಕಿಂತ ಮುಂಚಿತವಾಗಿ ಕಳುಹಿಸಬೇಕು.
2. ಪ್ರಾಯೋಗಿಕ ಪರೀಕ್ಷೆಗಳ ಅಂಕಪಟ್ಟಿಗಳನ್ನು ಮೊಹರು ಮಾಡಿದ ಕವರುಗಳಲ್ಲಿ ಇಟ್ಟು ಕೇಂದ್ರದಲ್ಲಿ ನಡೆಯುವ ಎಲ್ಲಾ ವಿಷಯಗಳ ಪ್ರಾಯೋಗಿಕ (ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ಮುನ್ನ) ಪರೀಕ್ಷೆಗಳು ಮುಗಿದ ಮರು ದಿನವೇ ಕಳುಹಿಸಬೇಕು. ಈ ದಿನಾಂಕ ಮೀರಿ ಪ್ರಾಯೋಗಿಕ ಪರೀಕ್ಷೆಗಳ ಅಂಕಪಟ್ಟಿಗಳನ್ನು ಕಳುಹಿಸುವಂತಹ ಕಾಲೇಜುಗಳಿಗೆ/ಸಂಸ್ಥೆಗಳಿಗೆ ಸೇರಿದ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶಗಳು ತಡವಾಗಿ ಪ್ರಕಟವಾಗುವ ಸಂಭವವನ್ನು ತಪ್ಪಿಸಲು ಜಾಗರೂಕರಾಗಿರಲು ಕೋರಲಾಗಿದೆ. ಉತ್ತರ ಪತ್ರಿಕೆಗಳ ಕಟ್ಟುಗಳಲ್ಲಿ (Answer Book Bundles) ಅಂಕಪಟ್ಟಿಗಳನ್ನು ಕಳುಹಿಸಬಾರದೆಂದು ಸೂಚಿಸಲಾಗಿದೆ. ಅಂಕಪಟ್ಟಿಗಳನ್ನು ತಯಾರಿಸುವಾಗ ವಿದ್ಯಾರ್ಥಿಯ ನೋಂದಣಿ ಸಂಖ್ಯೆಯನ್ನು (Register Number) ಪೂರ್ಣವಾಗಿ ಬರೆಯಬೇಕೆಂಬ ವಿಚಾರವನ್ನು ಎಲ್ಲಾ ಪ್ರಾಯೋಗಿಕ ಅಂಕಗಳ ಪಟ್ಟಿಯನ್ನು ಪ್ರಾಯೋಗಿಕ ಪರೀಕ್ಷಕರಿಗೆ ತಿಳಿಸಬೇಕು ಹಾಗೂ ಸಂಬಂಧಪಟ್ಟ ಪ್ರಾಯೋಗಿಕ ಪತ್ರಿಕೆಯ ನಿಖರವಾದ ಕೋಡ್ ನಂಬರನ್ನು ತಪ್ಪದೆ ಬರೆಯಬೇಕೆಂಬ ವಿಚಾರವನ್ನು ಸಹ ಪ್ರಾಯೋಗಿಕ ಪರೀಕ್ಷಕರಿಗೆ ತಿಳಿಸಬೇಕು. ಪ್ರಾಯೋಗಿಕ ಪರೀಕ್ಷಕರಿಗೆ ಪ್ರಾಯೋಗಿಕ ಅಂಕಗಳ ಪಟ್ಟಿಯನ್ನು (Marks List) ಒದಗಿಸುವುದಕ್ಕಿಂತ ಮೊದಲು ಆಯಾಯಾ ಕೇಂದ್ರದ ಮೊಹರನ್ನು (Seal) ಮಾರ್ಕ್ಸ್ ಲಿಸ್ಟ್‌ನ ಕೆಳಗಡೆ ಮಧ್ಯಭಾಗದಲ್ಲಿ ತಪ್ಪದೆ ಹಾಕಬೇಕು.

ಕುಲಸಚಿವ (ಪರೀಕ್ಷಾಂಗ)

ಗೆ:

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಮೈಸೂರು, ಮಂಡ್ಯ ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು/ನಿರ್ದೇಶಕರು/ಡೀನರು, ವಾಕ್ ಮತ್ತು ಶ್ರವಣ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು / ಜೆ.ಎಸ್.ಎಸ್. ಕಾಲೇಜು ವಾಕ್ ಮತ್ತು ಶ್ರವಣ ಸಂಸ್ಥೆ, ಜೆ.ಎಸ್.ಎಸ್ ಕಾಲೇಜು ಎಂ.ಜಿ.ರಸ್ತೆ, ಚಾಮರಾಜೇಂದ್ರ ದೃಶ್ಯ ಕಲಾ ಅಕಾಡೆಮಿ (ಕಾವ) ಸಿದ್ದಾರ್ಥನಗರ, ಮೈಸೂರು.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಅಧಿಕಾರಿ, ವಾರ್ತಾ ಭವನ, ಎಚ್.ಸಿ.ದಾಸಪ್ಪ ವೃತ್ತ, ಮೈಸೂರು – ಮೇಲ್ಕಂಡ ಪ್ರಕಟಣೆ ಮುಖ್ಯಾಂಶಗಳನ್ನು ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಚಾರ ಮಾಡಲು ಕೋರಿ ಪ್ರತಿ ಕಳುಹಿಸಲಾಗಿದೆ.
5. ನಿರ್ದೇಶಕರು, ಪ್ರಸಾರ ಭಾರತಿ ಕೇಂದ್ರ, ಯಾದವಗಿರಿ, ಮೈಸೂರು – ಈ ಅಧಿಸೂಚನೆಯ ಮುಖ್ಯಾಂಶಗಳನ್ನು ತಮ್ಮ ಬಾನುಲಿ ಹಾಗೂ ಟಿ.ವಿ ವಾಹಿನಿ ಕೇಂದ್ರದಿಂದ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ಹಾಗೆ ಭಿತ್ತರಿಸಲು ಏರ್ಪಾಟನ್ನು ಮಾಡಲು ಕೋರಿದೆ.
6. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನಾ ವಿಭಾಗ, ಮಾನಸಗಂಗೋತ್ರಿ, ಮೈಸೂರು 570 006.
7. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೌಲ್ಯಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ಉಪಕುಲಸಚಿವರು (ಶೈಕ್ಷಣಿಕ), ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
10. ನಿರ್ದೇಶಕರು, ICD, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು–ಈ ಅಧಿಸೂಚನೆಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.
11. ಅಧೀಕ್ಷಕರು, ಪರೀಕ್ಷಾ ಸುಧಾರಣಾ ಘಟಕ, ಪರೀಕ್ಷಾ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
12. ಪರೀಕ್ಷಾ ವಿಭಾಗದ ಎಲ್ಲಾ ಅಧೀಕ್ಷಕರು, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
13. ಎಲ್ಲಾ ಕಾರ್ಯನಿರ್ವಾಹಕರು (ಸಾಮಾನ್ಯ ವಿಭಾಗ ಮತ್ತು ಸ್ನಾತಕಪದವಿ ವಿಭಾಗ) ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
14. ಮಾನ್ಯ ಕುಲಪತಿಗಳ/ಕುಲಸಚಿವರ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿ ಅವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
15. ಕಛೇರಿ ಪ್ರತಿ.